# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನ್ಯಾಯಾಲಯ, ನವಲಗುಂದ.

| | |
|---|---|
| ಸಿ.ಸಿ. ನಂಬರ್ | : 452/2024 |
| ಸಿ.ಡಬ್ಲ್ಯೂ | : 09 |
| ಪಿ.ಡಬ್ಲ್ಯೂ | : 54 |
| ಸಾಕ್ಷಿಯ ಹೆಸರು | : ಧರ್ಮಗೌಡ ಬಸನಗೌಡ ಪಾಟೀಲ |
| ವಯಸ್ಸು | : 59 ವರ್ಷ |
| ಉದ್ಯೋಗ | : ಎ ಎಸ್ ಐ, ಕಲಘಟಗಿ ಪೊಲೀಸ ಠಾಣೆ |
| ವಾಸ ಸ್ಥಳ | : ಕಲಘಟಗಿ |

ದಿನಾಂಕಃ 20/11/2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-**

ನಾನು 2020 ರಿಂದ 2022 ವರೆಗೆ ASI ಎಂದು ನವಲಗುಂದ ಪೊಲೀಸ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 01-08-2021 ರಂದು ನಾನು ಠಾಣೆಯಲ್ಲಿದ್ದಾಗ ಚಾಸಾ-1 ರವರು ರಾ.07.45 ಗಂಟೆಗೆ ಠಾಣೆಗೆ ಹಾಜರಾಗಿ ಲಿಖಿತ ದೂರು, ಪಂಚನಾಮೆ ಹಾಗೂ ಮುದ್ದೆ ಮಾಲನ್ನು ಹಾಜರು ಪಡಿಸಿದ್ದು ಅದರ ಆಧಾರದ ಮೇಲೆ ಠಾಣಾ ಗುನ್ನಾ ಸಂಃ 125/2021 ನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಕಳುಹಿಸಿರುತ್ತೇನೆ. ನಂತರ ನ್ಯಾಯಾಲಯಕ್ಕೆ ಸ್ವತ್ತಿನ ವಿವರಣೆ ಪಟ್ಟಿಯನ್ನು ಕಳುಹಿಸಿರುತ್ತೇನೆ. ಚಾಸಾ-4 ರಿಂದ 6 ರವರ ಹೇಳಿಕೆಗಳನ್ನು ದಾಖಲಿಸಿಕೊಂಡಿರುತ್ತೇನೆ. ದಿಃ 15-09-2021 ರಂದು ಜಪ್ತಾದ ಮುದ್ದೆ ಮಾಲನ್ನು ಚಾಸಾ-7 ರವರ ಮುಖಾಂತರ ರಾಸಾಯನಿಕ ಪರೀಕ್ಷೆಗೆ ಕಳುಹಿಸಿರುತ್ತೇನೆ. ನಂತರ ವರದಿಯನ್ನು ದಿಃ 28-09-2021 ರಂದು ಪಡೆದುಕೊಂಡು ಆರೋಪಿಯ ವಿರುದ್ದ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಯು 2 ರ ಮೇಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-2(ಬಿ)** ಎಂದು ಗುರುತಿಸಲಾಯಿತು. ರಾಸಾಯನಿಕ ಪರೀಕ್ಷಾ ವರದಿಯನ್ನು ನೋಡಿ ಗುರುತಿಸಿದ್ದು **ನಿಪಿ-3** ಹಾಗೂ ಸಾಕ್ಷಿಯ ಸಹಿಯನ್ನು **ನಿಪಿ-3(ಎ)** ಎಂದು ಗುರುತಿಸಲಾಯಿತು.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಆರೋಪಿ ಹಾಗೂ ಮುದ್ದೆ ಮಾಲನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಶ್ರೀ ಎಸ್ ಎನ್ ಡಿ ವಕೀಲರಿಂದ**

ನಾನು ಘಟನಾ ಸ್ಥಳಕ್ಕೆ ಹೋಗಿರುವದಿಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಠಾಣೆಯಲ್ಲಿ ಪಡೆದುಕೊಂಡಿರುತ್ತೇನೆ. ಮೇಲಾಧಿಕಾರಿಯ ಮಾತು ಕೇಳಿ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ತೊಂದರೆ ಕೊಡಲು ಹಾಗೂ ಅಂಕಿ-ಸಂಖ್ಯೆಗೋಸ್ಕರ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd**/-

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**
**ನವಲಗುಂದ.**